# All India Radio: Bangalore
# National Bulletin In Kannada
# 11.03.2025 1.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**11.03.2025 1.10 p.m.**

**<><><><>**

ಮುಖ್ಯಾಂಶಗಳು

1. ಎರಡು ದಿನಗಳ ಭೇಟಿಗಾಗಿ ಮಾರಿಷಸ್ ತಲುಪಿದ ಪ್ರಧಾನಿ ನರೇಂದ್ರ ಮೋದಿ, ಪೋರ್ಟ್ ಲೂಯಿಸ್‌ನಲ್ಲಿ ಭವ್ಯ ಸ್ವಾಗತ
2. ದೇಶದ ಪ್ರತಿ ಜಿಲ್ಲೆಯಲ್ಲಿ ಡೇ ಕೇರ್ ಕ್ಯಾನ್ಸರ್ ಕೇಂದ್ರ ಸ್ಥಾಪನೆ - ಸಚಿವ ಜೆ.ಪಿ.ನಡ್ಡಾ
3. ಮಹಿಳೆ ಹಾಗೂ ಮಕ್ಕಳ ರಕ್ಷಣೆ, ಸಬಲೀಕರಣ, ಸಮಗ್ರ ಅಭಿವೃದ್ಧಿಗೆ ಭಾರತದ ಅಚಲ ಬದ್ಧತೆ; ಸಚಿವೆ ಅನ್ನಪೂರ್ಣದೇವಿ ಪುನರುಚ್ಚಾರ
4. ಇಂಡಿಯನ್ ಸೂಪರ್ ಲೀಗ್ ಫುಟ್‌ಬಾಲ್; ಇಂದು ಬೆಂಗಳೂರು ಎಫ್‌ಸಿ - ಮುಂಬೈ ಸಿಟಿ ಎಫ್‌ಸಿ ತಂಡಗಳ ನಡುವೆ ಮುಖಾಮುಖಿ

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಎರಡು ದಿನಗಳ ಅಧಿಕೃತ ಭೇಟಿಗಾಗಿ ಇಂದು ಮಾರಿಷಸ್‌ಗೆ ಆಗಮಿಸಿದರು. ರಾಜಧಾನಿ ಪೋರ್ಟ್ ಲೂಯಿಸ್ ವಿಮಾನ ನಿಲ್ದಾಣದಲ್ಲಿ ಪ್ರಧಾನಿ ಮೋದಿ ಅವರಿಗೆ ಮಾರಿಷಸ್ ಪ್ರಧಾನಿ ನವೀನ್ ಚಂದ್ರ ರಾಮ್ ಗೂಲಮ್ ಅವರು ಆತ್ಮೀಯ ಸ್ವಾಗತ ನೀಡಿದರು. ಈ ಸಂಬಂಧ ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿರುವ ಪ್ರಧಾನಿ ನರೇಂದ್ರ ಮೋದಿ, ವಿಮಾನ ನಿಲ್ದಾಣದಲ್ಲಿ ತಮ್ಮನ್ನು ವಿಶೇಷವಾಗಿ ಬರಮಾಡಿಕೊಂಡ ಸದ್ಭಾವನೆಗಾಗಿ ಮಾರಿಷಸ್ ಪ್ರಧಾನಿ ನವೀನ್ ಚಂದ್ರ ರಾಮ್ ಗೂಲಮ್ ಅವರಿಗೆ ಕೃತಜ್ಞರಾಗಿರುವುದಾಗಿ ಹೇಳಿದ್ದಾರೆ. ಈ ಭೇಟಿಯು ಮೌಲ್ಯಯುತ ಸ್ನೇಹಿತನೊಂದಿಗೆ ತೊಡಗಿಸಿಕೊಳ್ಳಲು ಹಾಗೂ ವಿವಿಧ ವಲಯಗಳಲ್ಲಿ ಸಹಯೋಗಕ್ಕಾಗಿ ಹೊಸ ಮಾರ್ಗಗಳನ್ನು ಶೋಧಿಸಲು ಅದ್ಭುತ ಅವಕಾಶವಾಗಿದೆ ಎಂದು ಅವರು ವಿಶ್ಲೇಷಿಸಿದ್ದಾರೆ. ಪ್ರಧಾನಿ ಮೋದಿ ಅವರು ಇಂದು ಮಾರಿಷಸ್ ಅಧ್ಯಕ್ಷ ದರ್ಮ್ ಗೋಕುಲ್, ಪ್ರಧಾನಿ ನವೀನ್ ಚಂದ್ರ ರಾಮ್ ಗೂಲಮ್ ಅವರನ್ನು ಭೇಟಿ ಮಾಡಲಿದ್ದಾರೆ. ನಂತರ ಸಮುದಾಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಲಿದ್ದಾರೆ. ಪ್ರಧಾನಿ ಮೋದಿ ಅವರನ್ನು ಸ್ವಾಗತಿಸಲು ಭಾರತೀಯ ಸಮುದಾಯದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿದ್ದು, ಸಾಂಸ್ಕೃತಿಕ ಕಾರ್ಯಕ್ರಮ ಪ್ರದರ್ಶಿಸಿದರು. ಮಾರಿಷಸ್‌ನ ಎರಡು ದಿನಗಳ ಭೇಟಿಯ ವೇಳೆ ಪ್ರಧಾನಿ ನರೇಂದ್ರ ಮೋದಿ, ಸಾಮರ್ಥ್ಯ ವೃದ್ಧಿಯಿಂದ ಹಿಡಿದು ಸಮುದಾಯ ಸಂಬಂಧಿತ ಮೂಲಸೌಕರ್ಯದವರೆಗೆ ಭಾರತದ ಅನುದಾನ ಹೊಂದಿದ ೨೦ಕ್ಕೂ ಹೆಚ್ಚು ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ. ಪ್ರಧಾನಿ ನಾಳೆ ಮಾರಿಷಸ್ ರಾಷ್ಟ್ರೀಯ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

<><><>

ಕೇಂದ್ರ ಸರ್ಕಾರ ಮುಂದಿನ ಮೂರು ವರ್ಷಗಳಲ್ಲಿ ದೇಶದ ಪ್ರತಿ ಜಿಲ್ಲೆಯಲ್ಲಿ ಡೇ ಕೇರ್ ಕ್ಯಾನ್ಸರ್ ಸೆಂಟರ್‌ಗಳನ್ನು ತೆರೆಯಲಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ ರಾಜ್ಯಸಭೆಗಿಂದು ತಿಳಿಸಿದ್ದಾರೆ.

ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಗೆ ಉತ್ತರಿಸಿದ ಸಚಿವರು, ೨೦೨೫-೨೬ನೇ ಸಾಲಿನಲ್ಲಿ ೨೦೦ ಡೇ ಕೇರ್ ಕ್ಯಾನ್ಸರ್ ಸೆಂಟರ್‌ಗಳನ್ನು ತೆರೆಯಲಾಗುವುದು ಎಂದು ಸಚಿವರು ಪ್ರಕಟಿಸಿದರು. ಇತ್ತೀಚಿನ ವರದಿಯನ್ನು ಉಲ್ಲೇಖಿಸಿ, ಆಯುಷ್ಮಾನ್ ಭಾರತ್-ಪಿಎಂ ಜನ್ ಆರೋಗ್ಯ ಯೋಜನೆಯ ಅನುಷ್ಠಾನದೊಂದಿಗೆ ಕ್ಯಾನ್ಸರ್ ರೋಗಿಗಳ ಚಿಕಿತ್ಸೆ, ರೋಗದ ತಪಾಸಣೆಯ ನಂತರ ೩೦ ದಿನಗಳಲ್ಲಿ ಪ್ರಾರಂಭವಾಗುತ್ತದೆ. ರಾಷ್ಟ್ರೀಯ ಆರೋಗ್ಯ ಮಿಷನ್ ಅಡಿಯಲ್ಲಿ ಕೈಗೆಟಕುವ ಮತ್ತು ಗುಣಮಟ್ಟದ ಆರೋಗ್ಯ ಸೇವೆ ಒದಗಿಸಲು ಸರ್ಕಾರ ಕೆಲಸ ಮಾಡುತ್ತಿದೆ ಎಂದು ಸಚಿವರು ಹೇಳಿದರು.

<><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಪಂಜಾಬ್‌ನ ಭಟಿಂಡಾದ ಕೇಂದ್ರೀಯ ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇಶದ ಅಭಿವೃದ್ಧಿಯಲ್ಲಿ ಕೃಷಿ ಕ್ಷೇತ್ರದ ಮಹತ್ವವನ್ನು ವಿವರಿಸಿದರು. ಕೃಷಿ ವಲಯದಲ್ಲಿ ಪಂಜಾಬ್ ಮುಂಚೂಣಿಯಲ್ಲಿದೆ ಎಂದು ಹೇಳಿದರು.

ಧ್ವನಿ; ರಾಷ್ಟ್ರಪತಿ (೩೫ ಸೆಕೆಂಡ್‌ಗಳು)

ಪಂಜಾಬ್ ರಾಜ್ಯಪಾಲ ಗುಲಾಬ್ ಚಂದ್ ಕಟಾರಿಯಾ, ಹರಿಯಾಣ ರಾಜ್ಯಪಾಲ ಭಂಡಾರು ದತ್ತಾತ್ರೇಯ, ಮುಖ್ಯಮಂತ್ರಿ ಭಗವಂತ್ ಮಾನ್, ಹರಿಯಾಣ ಮುಖ್ಯಮಂತ್ರಿ ನಾಯಬ್‌ಸಿಂಗ್ ಸೈನಿ ಸೇರಿದಂತೆ ಹಲವು ಗಣ್ಯರು ಪಾಲ್ಗೊಂಡಿದ್ದರು. ರಾಷ್ಟ್ರಪತಿಗಳು ಪಾಲ್ಗೊಳ್ಳುವ ಕಾರ್ಯಕ್ರಮಗಳ ಸ್ಥಳಗಳಲ್ಲಿ ಭಾರೀ ಭದ್ರತಾ ವ್ಯವಸ್ಥೆಗಳನ್ನು ಕೈಗೊಳ್ಳಲಾಗಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

<><><>

ಮಹಿಳಾ ಹಾಗೂ ಮಕ್ಕಳ ರಕ್ಷಣೆ, ಸಬಲೀಕರಣ ಹಾಗೂ ಸಮಗ್ರ ಅಭಿವೃದ್ಧಿಗೆ ಭಾರತ ತನ್ನ ಅಚಲ ಬದ್ಧತೆಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವೆ ಅನ್ನಪೂರ್ಣದೇವಿ ಪುನರುಚ್ಚರಿಸಿದ್ದಾರೆ. ನ್ಯೂಯಾರ್ಕ್‌ನಲ್ಲಿ ನಿನ್ನೆ ನಡೆದ ಮಹಿಳಾ ಸ್ಥಿತಿಗತಿ ಆಯೋಗದ ೬೯ನೇ ಅಧಿವೇಶನ ಉದ್ದೇಶಿಸಿ ಮಾತನಾಡಿದ ಸಚಿವರು, ಲಿಂಗ ಸಮಾನತೆ ಕುರಿತು ಭಾರತದ ಯಶೋಗಾಥೆಯನ್ನು ವಿವರಿಸಿ, ೧೨ ನಿರ್ಣಾಯಕ ವಲಯಗಳಲ್ಲಿ ಕಳವಳಗಳನ್ನು ಪರಿಹರಿಸಲಾಗಿದೆ ಎಂದು ಹೇಳಿದರು. ಭಾರತದಲ್ಲಿ ಮಹಿಳೆಯರು ಮತ್ತು ಮಕ್ಕಳ ಆರೋಗ್ಯ, ಪೋಷಣೆ, ಶಿಕ್ಷಣ ಹಾಗೂ ಆರ್ಥಿಕ ಅವಕಾಶಗಳನ್ನು ಸುಧಾರಿಸಲು ಗಮನಾರ್ಹವಾಗಿ ಕೊಡುಗೆ ನೀಡುತ್ತಿರುವ ಯೋಜನೆಗಳ ಪರಿಣಾಮಗಳನ್ನು ಪ್ರಮುಖವಾಗಿ ಪ್ರಸ್ತಾಪಿಸಿದರು. ಪ್ರತಿಯೊಬ್ಬ ಮಹಿಳೆ ಹಾಗೂ ಬಾಲಕಿಯರು ತಮ್ಮ ಹಕ್ಕುಗಳು ಹಾಗೂ ಸೌಲಭ್ಯಗಳನ್ನು ಪಡೆದುಕೊಳ್ಳುವುದನ್ನು ಖಾತರಿ ಪಡಿಸುವ ಸರ್ಕಾರದ

ಸಂಕಲ್ಪವನ್ನು ಪುನರುಚ್ಚರಿಸಿದ ಸಚಿವೆ ಅನ್ನಪೂರ್ಣದೇವಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಹಾಗೂ ಯೋಜನೆಯ ಫಲಗಳು ಅರ್ಹರಿಗೆ ತಲುಪಬೇಕಾದ ಅಗತ್ಯವನ್ನು ವಿವರಿಸಿದರು. ಪ್ರತಿಯೊಬ್ಬ ಮಹಿಳೆಯ ಸಬಲೀಕರಣ, ಪ್ರತಿ ಮಗುವನ್ನು ಸುರಕ್ಷಿತ ಹಾಗೂ ಬೆಂಬಲಿತ ವಾತಾವರಣದಲ್ಲಿ ಪೋಷಿಸುವ ಭವಿಷ್ಯಕ್ಕಾಗಿ ಸರ್ಕಾರ ಕೆಲಸ ಮಾಡುತ್ತಿದೆ ಎಂದು ಹೇಳಿದರು. ಅಧಿವೇಶನದಲ್ಲಿ ವಿಶ್ವಸಂಸ್ಥೆಯ ಎಲ್ಲ ಸದಸ್ಯ ರಾಷ್ಟ್ರಗಳು, ಅಂತರ ಸರ್ಕಾರಿ ಸಂಸ್ಥೆಗಳು, ಖಾಸಗಿ ವಲಯ, ಲೋಕೋಪಕಾರಿಗಳು, ಶೈಕ್ಷಣಿಕ ತಜ್ಞರು, ನಾಗರಿಕ ಸಮಾಜ ಮಹಿಳಾ ಸಮುದಾಯ ಸಂಸ್ಥೆಗಳು ಹಾಗೂ ವಿಶ್ವಸಂಸ್ಥೆಯ ವಿವಿಧ ಸಂಸ್ಥೆಗಳ ಪ್ರತಿನಿಧಿಗಳು ದೊಡ್ಡ ಪ್ರಮಾಣದಲ್ಲಿ ಪಾಲ್ಗೊಂಡಿದ್ದರು.

<><><>

ಕೇಂದ್ರ ಸರ್ಕಾರ ಮುಂದಿನ ಮಾರ್ಚ್ ೩೧ರವರೆಗೆ ಉದ್ದಿನ ಮೇಲಿನ ಸುಂಕರಹಿತ ಆಮದನ್ನು ಮತ್ತೊಂದು ವರ್ಷದವರೆಗೆ ವಿಸ್ತರಿಸಲಾಗಿದೆ. ವಿದೇಶಿ ವ್ಯಾಪಾರ ನಿರ್ದೇಶನಾಲಯ ತನ್ನ ಅಧಿಸೂಚನೆಯಲ್ಲಿ ಆಮದು ಸುಂಕರಹಿತ ಉದ್ದಿನಬೇಳೆ ನೀತಿಯನ್ನು ೨೦೨೬ರ ಮಾರ್ಚ್ ೩೧ರವರೆಗೆ ವಿಸ್ತರಿಸಲಾಗಿದೆ ಎಂದು ತಿಳಿಸಿದೆ. ಈ ವರ್ಷದ ಮಾರ್ಚ್ ಅಂತ್ಯದವರೆಗೆ ಈ ನಿಬಂಧನೆ ಮೊದಲು ಜಾರಿಯಲ್ಲಿತ್ತು. ಸರ್ಕಾರದ ಕ್ರಮದಿಂದ ದೇಶೀಯ ಮಾರುಕಟ್ಟೆಗಳಲ್ಲಿ ಉದ್ದಿನ ಬೆಲೆಗಳನ್ನು ಸ್ಥಿರಗೊಳಿಸಲು ನೆರವಾಗುತ್ತದೆ. ಭಾರತಕ್ಕೆ ಮ್ಯಾನ್ಮಾರ್ ಉದ್ದಿನಬೇಳೆ ರಫ್ತು ಮಾಡುವ ಪ್ರಮುಖ ದೇಶವಾಗಿದೆ. ಈ ಹಣಕಾಸು ವರ್ಷದ ಏಪ್ರಿಲ್-ನವೆಂಬರ್ ಅವಧಿಯಲ್ಲಿ ಉದ್ದಿನ ಆಮದು ೬೦೧.೧೨ ಮಿಲಿಯನ್ ಡಾಲರ್‌ಗಳಷ್ಟಿತ್ತು. ಈ ಪೈಕಿ ೫೪೪ ಮಿಲಿಯನ್ ಡಾಲರ್ ಮೌಲ್ಯದ ಆಮದನ್ನು ಮ್ಯಾನ್ಮಾರ್ ಜೊತೆಗೆ ಸಿಂಗಾಪುರ್, ಥೈಲ್ಯಾಂಡ್, ಬ್ರೆಜಿಲ್‌ನಿಂದ ಆಮದು ಮಾಡಿಕೊಳ್ಳಲಾಗಿದೆ. ಮಧ್ಯಪ್ರದೇಶ, ಉತ್ತರ ಪ್ರದೇಶ, ಆಂಧ್ರಪ್ರದೇಶ, ರಾಜಸ್ಥಾನ, ತಮಿಳುನಾಡು ಹಾಗೂ ಮಹಾರಾಷ್ಟ್ರ ರಾಜ್ಯಗಳು ಹೆಚ್ಚಿನ ಪ್ರಮಾಣದಲ್ಲಿ ಉದ್ದು ಬೆಳೆಯುವ ರಾಜ್ಯಗಳಾಗಿವೆ.
ಭಾರತವು ವಿಶ್ವದ ಅತಿ ದೊಡ್ಡ ಉದ್ದು ಉತ್ಪಾದಕ ಹಾಗೂ ಗ್ರಾಹಕ ದೇಶವಾಗಿದೆ.

<><><>

ಸೌದಿ ಅರೆಬಿಯಾದ ರಾಜಕುಮಾರ ಮೊಹಮ್ಮದ್ ಬಿನ್ ಸಲ್ಮಾನ್ ಅವರು ನಿನ್ನೆ ಸಂಜೆ ಝೆಡ್ಡಾದಲ್ಲಿ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಹಾಗೂ ಅಮೆರಿಕಾ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರನ್ನು ಭೇಟಿ ಮಾಡಿದ್ದಾರೆ. ಇಂದು ನಿಗದಿಯಾಗಿರುವ ಅಮೆರಿಕಾ-ಉಕ್ರೇನ್ ಮಾತುಕತೆಗೆ ಮುನ್ನ ಝೆಲೆನ್ಸ್ಕಿ ಮತ್ತು ರುಬಿಯೊ ಇಬ್ಬರೂ ಸೌದಿ ಅರೆಬಿಯಾಕ್ಕೆ ಆಗಮಿಸಿದ್ದಾರೆ. ರಾಜಕುಮಾರ ಸಲ್ಮಾನ್ ಅವರು, ಝೆಲೆನ್ಸ್ಕಿ ಅವರನ್ನು ಅಲ್-ಸಲಾಮ್ ಅರಮನೆಯಲ್ಲಿ ಅಧಿಕೃತವಾಗಿ ಸ್ವಾಗತಿಸಿದರು. ನಂತರ ಔಪಚಾರಿಕ ಮಾತುಕತೆಗಳು ನಡೆದವು. ಇದಕ್ಕೂ ಮೊದಲು ರಾಜಕುಮಾರ ಸಲ್ಮಾನ್ ಅಮೆರಿಕಾ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರನ್ನು ಭೇಟಿಯಾದರು. ರಷ್ಯಾ ಮತ್ತು ಉಕ್ರೇನ್ ಸಮರವನ್ನು ಕೊನೆಗಾಣಿಸಲು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡೆಸುತ್ತಿರುವ ಪ್ರಯತ್ನಗಳನ್ನು ಮುನ್ನಡೆಸಲು ಅಮೆರಿಕಾ ವಿದೇಶಾಂಗ ಕಾರ್ಯದರ್ಶಿ ನಾಳೆಯವರೆಗೆ ಝೆಡ್ಡಾದಲ್ಲಿಯೇ ವಾಸ್ತವ್ಯ ಹೂಡಲಿದ್ದಾರೆ. ಅವರು ಉಕ್ರೇನ್ ನಿಯೋಗವನ್ನು ಸಹ ಭೇಟಿ ಮಾಡಲಿದ್ದಾರೆ. ಮುಂಬರುವ ಸಭೆಯ ಬಗ್ಗೆ ರುಬಿಯೊ ಆಶಾವಾದಿಯಾಗಿದ್ದಾರೆ ಎಂದು ಸೌದಿ

ಮಾಧ್ಯಮಗಳು ವರದಿ ಮಾಡಿದೆ. ಅಮೆರಿಕಾ ಮತ್ತು ಉಕ್ರೇನ್ ನಡುವಿನ ಖನಿಜ ಒಪ್ಪಂದದ ಕುರಿತ ವಿವರಗಳನ್ನು ಇನ್ನು ಅಂತಿಮಗೊಳಿಸಬೇಕಾಗಿದೆ ಎಂದು ಅವರು ಹೇಳಿದ್ದಾರೆ ಎಂಬುದು ಇಲ್ಲಿ ಗಮನಿಸಬಹುದಾಗಿದೆ.

<><><><>

ಹೋಳಿ ಹಬ್ಬದ ಹಿನ್ನೆಲೆಯಲ್ಲಿ ಪ್ರಾಯಾಣಿಕರ ಸುಗಮ ಪ್ರಯಾಣಕ್ಕಾಗಿ ಉತ್ತರ ರೈಲ್ವೆ ೪೦೦ಕ್ಕೂ ಹೆಚ್ಚು ವಿಶೇಷ ರೈಲುಗಳ ಕಾರ್ಯಾಚರಣೆ ನಡೆಸಲಿದೆ. ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಉತ್ತರ ರೈಲ್ವೆಯ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಹಿಮಾಂಶು ಶೇಖರ್ ಉಪಾಧ್ಯಾಯ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಸಮಗ್ರ ವ್ಯವಸ್ಥೆಗಳನ್ನು ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

<><><><>

ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಗ್ರ್ಯಾಂಡ್ ಪ್ರಿಕ್ಸ್ -೨೦೨೫ ಇಂದು ನವದೆಹಲಿಯ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ಆರಂಭವಾಗಲಿದೆ. ಮೂರು ದಿನಗಳ ಈ ಕ್ರೀಡಾಕೂಟದಲ್ಲಿ ೧೪೫ ಭಾರತೀಯ ಆಟಗಾರರು ಮತ್ತು ೨೦ ದೇಶಗಳ ೧೦೫ ಅಂತರರಾಷ್ಟ್ರೀಯ ಸ್ಪರ್ಧಿಗಳು ಸೇರಿದಂತೆ ಒಟ್ಟು ೨೫೦ ಪ್ಯಾರಾಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ಅವರು ೯೦ ಅಥ್ಲೆಟಿಕ್ಸ್ ಸ್ಪರ್ಧೆಗಳಲ್ಲಿ ಸ್ಪರ್ಧಿಸಲಿದ್ದಾರೆ, ಇದು ಭಾರತ ಆಯೋಜಿಸಿರುವ ಅತಿದೊಡ್ಡ ಪ್ಯಾರಾ-ಅಥ್ಲೆಟಿಕ್ಸ್ ಸ್ಪರ್ಧೆಗಳಲ್ಲಿ ಒಂದಾಗಿದೆ. ಪ್ಯಾರಿಸ್ ೨೦೨೪ ಪ್ಯಾರಾಲಿಂಪಿಕ್ಸ್ ಚಿನ್ನದ ಪದಕ ವಿಜೇತರಾದ ಪ್ರವೀಣ್ ಕುಮಾರ್, ನವದೀಪ್ ಸಿಂಗ್ ಮತ್ತು ಧರಮ್‌ಬೀರ್ ಭಾರತೀಯ ತಂಡವನ್ನು ಮುನ್ನಡೆಸಲಿದ್ದಾರೆ.

<><><><>

ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಇಂಡಿಯನ್ ಸೂಪರ್ ಲೀಗ್-ಐಎಸ್‌ಎಲ್ ಫುಟ್‌ಬಾಲ್ ಪಂದ್ಯದಲ್ಲಿ ಇಂದು ಬೆಂಗಳೂರು ಎಫ್‌ಸಿ ಮತ್ತು ಮುಂಬೈ ಸಿಟಿ ಎಫ್‌ಸಿ ತಂಡಗಳು ಸೆಣಸಲಿದ್ದು, ಪಂದ್ಯ ರಾತ್ರಿ ೭:೩೦ಕ್ಕೆ ಆರಂಭವಾಗಲಿದೆ. ಕೋಲ್ಕತ್ತಾದ ಕಿಶೋರ್ ಭಾರತಿ ಕ್ರೀಡಾಂಗಣದಲ್ಲಿ ನಡೆದ ಇಂಡಿಯನ್ ಸೂಪರ್ ಲೀಗ್-ಐಎಸ್‌ಎಲ್ ಫುಟ್ಬಾಲ್ ಪಂದ್ಯದಲ್ಲಿ ಕಳೆದ ರಾತ್ರಿ ಮೊಹಮ್ಮಡನ್ ಎಸ್‌ಸಿ ತಂಡ ಪಂಜಾಬ್ ಎಫ್‌ಸಿ ತಂಡವನ್ನು ೨-೨ ಗೋಲುಗಳಿಂದ ಡ್ರಾ ಮಾಡಿಕೊಂಡಿತು.

<><><><>

ಮುಂಬೈನಲ್ಲಿ ಇಂದು ನಡೆಯುವ ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ಕ್ಕೆ ಆರಂಭವಾಗಲಿದೆ. ಮುಂಬೈನಲ್ಲಿ ಕಳೆದ ರಾತ್ರಿ ನಡೆದ ಡಬ್ಲ್ಯೂ ಪಿ ಎಲ್- ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡ ಗುಜರಾತ್ ಜೈಂಟ್ಸ್ ತಂಡದ ವಿರುದ್ಧ ೯ ರನ್‌ಗಳಿಂದ ಜಯಗಳಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>